# ಕರ್ನಾಟಕ ಸರ್ಕಾರದ ನಡವಳಿಗಳು

225

ವಿಷಯ: ಹಾವೇರಿ ಜಿಲ್ಲೆ, ರಾಣೆಬೆನ್ನೂರು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-I)ಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ನಅಇ 125 ಬೆಮಪ್ರಾ 2007, ದಿನಾಂಕ: 15.06.2007.

(2) ರಾಣೆಬೆನ್ನೂರು ನಗರ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ: ನಯೋಪ್ರಾರಾ/ಮಾಯೋ(ಅಂ)(ಪ-1)/9/2009-10, ದಿನಾಂಕ: 03.05.2009.

(3) ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ: ನಯೋ(10)/ಉನಿI/ರಾಣೆಬೆನ್ನೂರು/ಮ.ಯೋ.(ಪ-I)/ಅಂತಿಮ/2009 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ: 05.06.2009.

-*-*-

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ರಾಣೆಬೆನ್ನೂರು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-I)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ರಾಣೆಬೆನ್ನೂರು ನಗರ ಯೋಜನಾ ಪ್ರಾಧಿಕಾರವು ರಾಣೆಬೆನ್ನೂರು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪರಿಷ್ಕೃತ-I)ಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ ರಾಣೆಬೆನ್ನೂರು ಪಟ್ಟಣದ ಜನಸಂಖ್ಯೆಯು 2021 ರಲ್ಲಿ 1,59,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ರಾಣೆಬೆನ್ನೂರು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 19633.99 ಹೆಕ್ಟೇರ್ ಪ್ರದೇಶದಲ್ಲಿ 1784.80 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಒಟ್ಟು 1784.80 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 898.72 ಹೆಕ್ಟೇರ್ (ಶೇ.50.52), ವಾಣಿಜ್ಯಕ್ಕಾಗಿ 92.58 ಹೆಕ್ಟೇರ್ (ಶೇ.5.20), ಕೈಗಾರಿಕೆಗಾಗಿ 103.21 ಹೆಕ್ಟೇರ್ (ಶೇ.5.80), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 117.23 ಹೆಕ್ಟೇರ್ (ಶೇ.6.58), ಉದ್ಯಾನವನ / ಬಯಲು ಜಾಗೆಗಳಿಗೆ 218.40 ಹೆಕ್ಟೇರ್

(ಶೇ.12.27) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 348.79 ಹೆಕ್ಟೇರ್ (ಶೇ.19.6...) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆ (ಪರಿಷ್ಕೃತ-I)ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 202 ಬೆಮಪ್ರಾ 2009,**
**ಬೆಂಗಳೂರು, ದಿನಾಂಕ: 03.07.2009**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಣೆಬೆನ್ನೂರು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-I)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆ (ಪರಿಷ್ಕೃತ-I)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ ಸದರಿ ಪ್ರಕಟಿತ 100 ಪ್ರತಿಗಳನ್ನು ಈ ಇಲಾಖೆಗೆ ಒದಗಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2. ಅಧ್ಯಕ್ಷರು, ರಾಣೆಬೆನ್ನೂರು ನಗರ ಯೋಜನಾ ಪ್ರಾಧಿಕಾರ, ರಾಣೆಬೆನ್ನೂರು.
3. ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಹಾವೇರಿ.
4. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.